# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103☎:0816 - 2255650,2273511 ಫ್ಯಾಕ್ಸ್ : 0816-2270719

ಸಂಖ್ಯೆ:ತು.ವಿ.: ಪ.ವಿ.:ವಿ.ನಿ-03:2020-21 254

ದಿನಾಂಕ: 08.09.2020

## ಅಧಿಸೂಚನೆ

**ವಿಷಯ:** 2020 ರ ಸೆಪ್ಟೆಂಬರ್ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ದೈಹಿಕ ಶಿಕ್ಷಣ(ಬಿ.ಪಿ.ಇಡಿ) ಪದವಿ ನಾಲ್ಕನೇ ಸೆಮಿಸ್ಟರ್(ನವೀನ & ಪೂರಕ) ಪರೀಕ್ಷೆಗಳ ಅಂತಿಮ ವೇಳಾಪಟ್ಟಿ, ಪರೀಕ್ಷಾ ಕೇಂದ್ರ ಘೋಷಣೆ ಹಾಗೂ ಪರೀಕ್ಷಾ ಮುಖ್ಯ ಅಧೀಕ್ಷಕರ ನೇಮಕಾತಿ ಕುರಿತು.

**ಉಲ್ಲೇಖ:** 1. UGC D.O.Letter No. F.1-1/2020(Secy), Dated:08.07.2020

2. Governement Order No. ED/197/UNE/2020, Bangalore, Dated:10.07.2020
3. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 07.09.2020

* * * * *

2019-20 ನೇ ಶೈಕ್ಷಣಿಕ ಸಾಲಿನ ಸ್ನಾತಕ ದೈಹಿಕ ಶಿಕ್ಷಣ (ಬಿ.ಪಿ.ಇಡಿ) ಪದವಿಯ ನಾಲ್ಕನೇ ಸೆಮಿಸ್ಟರ್ (ನವೀನ & ಪೂರಕ) ಪರೀಕ್ಷೆಗಳು 2020 ರ ಸೆಪ್ಟೆಂಬರ್ ಮಾಹೆಯಲ್ಲಿ ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅಂತಿಮ ವೇಳಾಪಟ್ಟಿಯಂತೆ (Annexure-01) ನಡೆಯುತ್ತವೆ. ಸದರಿ ವೇಳಾಪಟ್ಟಿಯನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ಈ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, **ಶ್ರೀ ಸಿದ್ಧಗಂಗಾ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಶ್ರೀ ಸಿದ್ಧಗಂಗಾ ಮಠ, ಕ್ಯಾತ್ಸಂದ್ರ, ತುಮಕೂರು ಈ ಕಾಲೇಜನ್ನು ಪರೀಕ್ಷಾ ಕೇಂದ್ರವನ್ನಾಗಿ ಘೋಷಿಸಲಾಗಿದೆ.**

ಈ ಪರೀಕ್ಷಾ ಕೇಂದ್ರಕ್ಕೆ ಸದರಿ ಕಾಲೇಜಿನ **ಪ್ರಾಂಶುಪಾಲರನ್ನು ಪರೀಕ್ಷಾ ಮುಖ್ಯ ಅಧೀಕ್ಷಕರನ್ನಾಗಿ ನೇಮಕಾತಿ ಮಾಡಲಾಗಿದ್ದು, ಕೋವಿಡ್- 19 ರ ಪ್ರಯುಕ್ತ ಉಲ್ಲೇಖ 01 & 02 ರಲ್ಲಿ ಸೂಚಿಸಿರುವಂತೆ ಯು.ಜಿ.ಸಿ. ಮತ್ತು ಕರ್ನಾಟಕ ಸರ್ಕಾರದ ಪರೀಕ್ಷಾ ಮಾರ್ಗಸೂಚಿಗಳನುಸಾರವಾಗಿ ಪರೀಕ್ಷೆಗಳನ್ನು ನಡೆಸಲು ಕಡ್ಡಾಯವಾಗಿ ಅಗತ್ಯ ಕ್ರಮ ಕೈಗೊಂಡು ಪರೀಕ್ಷಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವುದು.**

ಪರೀಕ್ಷಾ ಕಾರ್ಯಗಳಲ್ಲಿ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಕೂಡಲೇ **ಉಪಕುಲಸಚಿವರು (ಪರೀಕ್ಷಾಂಗ)**- ಮೊ.ಸಂ.-9481266917, **ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

**ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ (Examination Chief Superintendent) ಸೂಚನೆಗಳು:**

1. ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವವರು ಪರೀಕ್ಷಾ ದಿನದಂದು ಪರೀಕ್ಷಾ ಸಮಯಕ್ಕಿಂತ **ಅರ್ಧ ಗಂಟೆ** ಮುಂಚಿತವಾಗಿ ಕಾಲೇಜಿಗೆ ಬಂದು ಮೊಹರು ಮಾಡಿದ ಪ್ರಶ್ನೆ ಪತ್ರಿಕೆ ಲಕೋಟೆಯನ್ನು ತಮ್ಮ ಸಮ್ಮುಖದಲ್ಲೇ ತೆರೆದು ಪರೀಕ್ಷಾ ಕೊಠಡಿಗೆ ವಿತರಿಸುವ ವ್ಯವಸ್ಥೆ ಮಾಡಬೇಕು. ಮುಖ್ಯ ಅಧೀಕ್ಷಕರು ಇಲ್ಲದೆ ಇದ್ದಾಗ ಅನಧಿಕೃತವಾಗಿ ಬೇರೆ ಯಾರು ಕೂಡ ಪ್ರಶ್ನೆ ಪತ್ರಿಕೆಗಳ ಲಕೋಟೆಯನ್ನು ತೆರೆಯಬಾರದು.
2. ಯಾವುದೇ ಕಾರಣಕ್ಕೂ ಪರೀಕ್ಷಾ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಮತ್ತು ಪರೀಕ್ಷಾ ಪಾವಿತ್ರತೆಯನ್ನು ಕಾಪಾಡುವುದು ತಮ್ಮ ಹೊಣೆಗಾರಿಕೆಯಾಗಿರುತ್ತದೆ.
3. Question Paper Codeಗೆ ಅನುಸಾರವಾಗಿ ಉತ್ತರ ಪತ್ರಿಕೆ ಪುಸ್ತಕಗಳನ್ನು Room Superintendent's Invigilation Dairyಯೊಂದಿಗೆ ಪ್ಯಾಕ್ ಮಾಡುವುದು ಹಾಗೂ ಆ ಪ್ಯಾಕ್‌ನ ಮೇಲೆ ದಿನಾಂಕ, ವಿಷಯ, ಕಾಲೇಜಿನ ಕೋಡ್, ಕಾಲೇಜಿನ ಹೆಸರು ಮತ್ತು ವಿಳಾಸ, Question Paper Codeನ್ನು ಹಾಗೂ ಬಂಡಲ್‌ನಲ್ಲಿರುವ ಒಟ್ಟು ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು.
4. ಪ್ರಶ್ನೆ ಪತ್ರಿಕೆಗಳು ಯಾವ ಕಾರಣಕ್ಕೂ ಪರೀಕ್ಷೆಯ ಸಮಯಕ್ಕಿಂತ ಮುಂಚೆ ಬಹಿರಂಗಗೊಳ್ಳದಂತೆ ಮುಖ್ಯ ಅಧೀಕ್ಷಕರು ಸುರಕ್ಷಿತವಾಗಿ ಸಂರಕ್ಷಿಸುವುದು, ಗೌಪ್ಯತೆ ಕಾಪಾಡುವುದಕ್ಕೆ ಮೊದಲ ಆದ್ಯತೆ ನೀಡಲು ತಿಳಿಸಿದೆ.

(2 ನೇ ಪುಟಕ್ಕೆ)

<u>ಪ್ರಶ್ನೆ ಪತ್ರಿಕೆಗಳನ್ನು ಸ್ವೀಕರಿಸುವ ಬಗ್ಗೆ ಸೂಚನೆಗಳು:</u>

ತಮ್ಮ ಪರೀಕ್ಷಾ ಕೇಂದ್ರಕ್ಕೆ ಸಂಬಂಧಿಸಿದ ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷೆ ನಡೆಯುವ ದಿನಗಳಂದು **ಬೆಳಗ್ಗೆ 9:30** ಗಂಟೆಗೆ ಪರೀಕ್ಷಾ ಮುಖ್ಯ ಅಧೀಕ್ಷಕರು ಅಥವಾ ಅವರಿಂದ ಅಧಿಕೃತವಾಗಿ ನಿಯೋಜಿಸಲ್ಪಟ್ಟವರು, **ಕುಲಸಚಿವರು (ಪರೀಕ್ಷಾಂಗ), ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಂದ ಪಡೆದುಕೊಳ್ಳುವುದು.

<u>ಉತ್ತರ ಪತ್ರಿಕೆಗಳನ್ನು ರವಾನಿಸುವ ಬಗ್ಗೆ ಸೂಚನೆಗಳು:</u>

ತಮ್ಮ ಪರೀಕ್ಷಾ ಕೇಂದ್ರದಲ್ಲಿ ನಡೆದ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಅದೇ ದಿನ ಕಾಲೇಜಿನವರೇ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಸುರಕ್ಷಿತವಾಗಿ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ವಿಶ್ವವಿದ್ಯಾನಿಲಯಕ್ಕೆ ತಲುಪಿಸುವ ಜವಾಬ್ದಾರಿ ಪರೀಕ್ಷಾ ಮುಖ್ಯ ಅಧೀಕ್ಷಕರದ್ದಾಗಿರುತ್ತದೆ.

**ಮೇಲ್ಕಂಡ ಎಲ್ಲಾ ವಿಷಯಗಳು ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಮತ್ತು ಪರೀಕ್ಷೆಗಳು ಸುಗಮವಾಗಿ ನಡೆಯಲು ಕ್ರಮಕೈಗೊಳ್ಳುವುದು.**

**ಆದೇಶದ ಮೇರೆಗೆ,**

10/9/2024

ಕುಲಸಚಿವರು (ಪರೀಕ್ಷಾಂಗ)

**ಗೆ,**

**ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ದೈಹಿಕ ಶಿಕ್ಷಣ ಕಾಲೇಜು, ಸಿದ್ಧಗಂಗಾ ಮಠ, ತುಮಕೂರು.**

ಪ್ರತಿಗಳು:

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಕಛೇರಿ ಪ್ರತಿ.

ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ : 0816-2255650, 2273511 ಫ್ಯಾಕ್ಸ್ : 0816- 2270719

## ಸೂಚನಾ ಫಲಕಕ್ಕೆ ಕಡ್ಡಾಯವಾಗಿ

1. ಕೋವಿಡ್-19 ರ ಪ್ರಯುಕ್ತ, ವಿದ್ಯಾರ್ಥಿಗಳು ಪರೀಕ್ಷೆಗೆ ಆಗಮಿಸುವಾಗ ಕಡ್ಡಾಯವಾಗಿ ಮಾಸ್ಕ್ ಹಾಗೂ ಸ್ಯಾನಿಟೈಸರ್ ಬಳಸುವುದು ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು ಹಾಗೂ ಶುದ್ಧ ಕುಡಿಯುವ ನೀರನ್ನು ತಮ್ಮ ಮನೆಯಿಂದಲೇ ತರುವುದು.
2. ವಿದ್ಯಾರ್ಥಿಗಳು ತಮ್ಮ ಉತ್ತರ ಪತ್ರಿಕೆಯಲ್ಲಿ ಯಾವುದೇ ರೀತಿಯ ಹೆಸರು, ಗುರುತು, ಚಿಹ್ನೆ ಅಥವಾ ಸಂಕೇತಗಳನ್ನು ಬರೆಯಬಾರದು. ಬರೆದಿರುವುದು ಕಂಡುಬಂದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಅಕ್ರಮ ಚಟುವಟಿಕೆಯೆಂದು ಪರಿಗಣಿಸಿ ಅದನ್ನು ಮೌಲ್ಯಮಾಪನ ಕಾರ್ಯದಿಂದ ಹೊರಗಿಡಲಾಗುವುದು.
3. ವಿದ್ಯಾರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಮೊಬೈಲ್‌ಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
4. ವಿದ್ಯಾರ್ಥಿಗಳು ಪರೀಕ್ಷಾ ಅವಧಿ ಮುಗಿಯುವವರೆಗೆ ಪ್ರಶ್ನೆ ಪತ್ರಿಕೆಗಳನ್ನು ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋಗುವಂತಿಲ್ಲ.

ಆದೇಶದ ಮೇರೆಗೆ

[signature] 10/9/20

ಕುಲಸಚಿವರು (ಪರೀಕ್ಷಾಂಗ)

Annexure-01

# TUMKUR UNIVERSITY

Pareeksha Bhavan, B.H. Road, Tumkur – 572103, Phone: 0816- 2255650, 2273511 Fax: 0816-2270719

No.TU: EXAM : Time Table :B.P.Ed:2020-21

Date: 08.09.2020

The Final Time Table of Fourth Semester B.P.Ed. Theory Examinations
September-2020

| DATE & DAY | TIME | SUBJECTS |
|---|---|---|
| 24.09.2020 Thursday | 10.00 to 01.00 | Measurement and Evaluation in Physical Education |
| 25.09.2020 Friday | 10.00 to 01.00 | Kinesiology and Biomechanics in Physical Education |
| 28.09.2020 Monday | 10.00 to 01.00 | Research and Statistics in Physical Education |
| 29.09.2020 Tuesday | 10.00 to 01.00 | Theory of Sports and Games |

10/9/2020

Registrar(Evaluation)